(84)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಿಂಧನೂರು ಸ್ಥಳೀಯ ಯೋಜನಾ ಪ್ರದೇಶದ ಮಾಸ್ಟರ್ ಪ್ಲಾನ್‌ಗೆ ಅಂತಿಮ ಅನುಮೋದನೆ ನಿಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ:ನಅಇ/44/ಗುಅಪ್ರಾ 2004 ಬೆಂಗಳೂರು, ದಿನಾಂಕ 11-1-2005.

(2) ನಗರ ಯೋಜನಾ ನಿರ್ದೇಶಕರ ಕಡತ ಸಂಖ್ಯೆ:ನಯೋ(15):ಸಿಂಧನೂರು:ಮಾ.ಪ್ಲಾ.ಪ:2006, ದಿನಾಂಕ 25-5-2006.

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ರಾಯಚೂರು ಜಿಲ್ಲೆ ಸಿಂಧನೂರು ಪಟ್ಟಣದ ವ್ಯಾಪಕಾಭಿವೃದ್ಧಿಗೆ ಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ. ಮೇಲೆ ಓದಲಾದ(2)ರ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು ಸಿಂಧನೂರು ಪಟ್ಟಣದ ಜನಸಂಖ್ಯೆಯು 2001ರಲ್ಲಿ 61,292 ಇದ್ದು, 2021ರವೇಳಗೆ ಈ ಜನಸಂಖ್ಯೆಯು 1,25,000 ಅಗಬಹುದೆಂದು ಅಂದಾಜಿಸಿ ಮಾಸ್ಟರ್ ಪ್ಲಾನ್‌ನ್ನು ತಯಾರಿಸಲಾಗಿದೆ. ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶದ 21370 ಹೆಕ್ಟೇರ್ ವಿಸ್ತೀರ್ಣದಲ್ಲಿ 1254.84 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಯೋಜನೆಯನ್ನು ರೂಪಿಸಲಾಗಿದೆ.

ನಗರ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 1254.84 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ ಶೇಕಡ 55.34, ವಾಣಿಜ್ಯಕ್ಕೆ ಶೇಕಡ 8.47, ಕೈಗಾರಿಕೆಗೆ ಶೇಕಡ 6.43 ಸಾರ್ವಜನಿಕ: ಅರೆ ಸಾರ್ವಜನಿಕ ಶೇಕಡ 4.22, ಉದ್ಯಾನವನ ಮತ್ತು ಬಯಲು ಜಾಗಕ್ಕೆ ಶೇಕಡ 8.00, ನಾಗರೀಕ ಸೌಲಭ್ಯಕ್ಕೆ ಶೇಕಡ 1.00 ಸಾರಿಗೆ ಮತ್ತು ಸಂಪರ್ಕಕ್ಕಾಗಿ ಶೇಕಡ 16.53 ವಿಸ್ತೀರ್ಣವನ್ನು ನಿಗದಿ ಪಡಿಸಲಾಗಿದೆ.

(13)

DD(P) 7/7

114
7/7/06

170
6704

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 255 ಬೆಮಪ್ರಾ 2006**
**ಬೆಂಗಳೂರು, ದಿನಾಂಕ:4-7-2006**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ರಾಯಚೂರು ಜಿಲ್ಲೆ ಸಿಂಧನೂರು ಯೋಜನಾ ಪ್ರಾಧಿಕಾರದ ಮಾಸ್ಟರ್ ಪ್ಲಾನ್ ಪರಿಷ್ಕೃತ -1ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮಾಸ್ಟರ್ ಪ್ಲಾನ್‌ಗೆ ಅಂತಿಮ ಅನುಮೋದನೆ ನೀಡಿದ ಗುರುತ್ತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/7/06
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

1)ನಿರ್ದೇಶಕರು, ನಗರ ಯೋಜನಾ ನಿರ್ದೇಶನಾಲಯ, ಬೆಂಗಳೂರು.
2)ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಸಿಂಧನೂರು.
3)ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿ.